ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೬೧	ಬೆಂಗಳೂರು, ಬುಧವಾರ, ೧೯, ಆಗಸ್ಟ್, ೨೦೨೬ (ಶ್ರಾವಣ, ೨೮, ಶಕವರ್ಷ, ೧೯೪೮)	ಸಂಚಿಕೆ ೧೬೧
Volume 161	BENGALURU, WEDNESDAY, 19, AUGUST, 2026 (SHRAVANA , 28, SHAKAVARSHA, 1948)	Issue 161

ಭಾಗ ೩

ಸರ್ಕಾರದ ಆಯಾ ಇಲಾಖೆಗಳ ಮುಖ್ಯಸ್ಥರ ಮತ್ತು ಸ್ಥಳೀಯ ಪ್ರಾಧಿಕಾರಿಗಳಿಗೆ ಸಂಬಂಧಿಸಿದ ಅಧಿಸೂಚನೆಗಳು

ಕರ್ನಾಟಕ ಸರ್ಕಾರ

ಸಂಖ್ಯೆ: RD-LGK/38/2025

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ: ಬಿ.ಆರ್.ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ: 12.08.2026.

ಅಧಿಸೂಚನೆ
ನಮೂನೆ 29

ಕರ್ನಾಟಕ ಭೂ ಕಂದಾಯ ಅಧಿನಿಯಮ ಕಲಂ 68ನೇ ಪ್ರಕರಣದ (5)ನೇ ಉಪ-ಪ್ರಕರಣದ ಮೇರೆಗಿನ ಮತ್ತು ಕರ್ನಾಟಕ ಭೂ ಕಂದಾಯ ನಿಯಮಗಳು 1966ರ ನಿಯಮ 96 ರನ್ವಯ ಘೋಷಣೆ

ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 68ನೇ ಪ್ರಕರಣದ (5)ನೇ ಉಪಪ್ರಕರಣದಿಂದ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಸದರಿ ಪ್ರಕರಣದ (1)ನೇ ಉಪ-ಪ್ರಕರಣದ ಮೇರೆಗೆ ಹೊರಡಿಸಿದ ಅಧಿಸೂಚನೆ ಸಂಖ್ಯೆ: RD-LGK/38/2025 ರ ದಿನಾಂಕ: 01.04.2026 (ರಾಜ್ಯ ಪತ್ರದಲ್ಲಿ ಪ್ರಕಟಗೊಂಡ ದಿನಾಂಕ: 09.04.2026) ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಮತ್ತು ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಸಾರ್ವಜನಿಕ ದಾರಿಯ ಭಾಗವು ಸಾರ್ವಜನಿಕರ ಉಪಯೋಗಕ್ಕೆ ಅಗತ್ಯವಿಲ್ಲವೆಂದು ವ್ಯವಹರಣೆಗಳ ದಾಖಲೆಗಳನ್ನು ಮತ್ತು ಕೋಲಾರ ಜಿಲ್ಲೆಯ ಜಿಲ್ಲಾಧಿಕಾರಿಯ ವರದಿಯನ್ನು ರಾಜ್ಯ ಸರ್ಕಾರವು ಪರಿಶೀಲಿಸಿದ ತರುವಾಯ, ಸಾರ್ವಜನಿಕ ಕಾಲುದಾರಿಯ ಅಂಥ ಭಾಗದಲ್ಲಿನ ಅಥವಾ ಅದರ ಮೇಲಣ ಸಾರ್ವಜನಿಕರ ಹಾಗೂ ವ್ಯಕ್ತಿಗಳ ಎಲ್ಲಾ ಹಕ್ಕುಗಳು ಕೊನೆಗೊಳ್ಳತಕ್ಕದ್ದೆಂದು ಈ ಮೂಲಕ ಘೋಷಿಸಿದೆ.

ಅನುಸೂಚಿ

ದಾರಿಯ ಭಾಗವು ಇರುವ ಗ್ರಾಮ	ಬಸವನತ್ತ ಗ್ರಾಮ, ಕಸಬಾ ಹೋಬಳಿ
ತಾಲ್ಲೂಕು	ಕೋಲಾರ
ಜಿಲ್ಲೆ	ಕೋಲಾರ
ದಾರಿಯ ಭಾಗದ ವರ್ಣನೆ	ಬಸವನತ್ತ ಗ್ರಾಮದ ಸನಂ 42/2ಬಿ ರಲ್ಲಿ 0-04 ಗುಂಟೆ ಜಮೀನನ್ನು ಸರ್ಕಾರಿ 'ಬಿ' ಖರಾಬ್ ಎಂಬುದಾಗಿ ವರ್ಗೀಕರಿಸಲಾಗಿದ್ದು ಕಾಲುದಾರಿಯಾಗಿರುತ್ತದೆ..
ದಾರಿಯ ಭಾಗದ ಸರಿ ಸುಮಾರು ವಿಸ್ತೀರ್ಣ	ಸನಂ.42/2ಬಿ ರಲ್ಲಿ ಬ ಖರಾಬ್ 0-04 ಗುಂಟೆ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಮೇರೆಗಳು:	**ಗ್ರಾಮ ನಕಾಶೆಯಂತೆ** ಚೆಕ್‌ಬಂದಿ ಪೂರ್ವ-ಸರ್ವೆ ನಂ.43 ಪಶ್ಚಿಮ-ರಸ್ತೆ ಉತ್ತರ- ಸರ್ವೆ ನಂ.39,41 ದಕ್ಷಿಣ- ಸರ್ವೆ ನಂ.44

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಹಾಂತಯ್ಯ ಎಸ್. ಹೊಸಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂ ಮಂಜೂರಾತಿ-1).

PR-1084

ಕರ್ನಾಟಕ ಸರ್ಕಾರ

ಸಂಖ್ಯೆ: RD-LGK/47/2026

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ: ಬಿ.ಆರ್.ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:30.07.2026

ಅಧಿಸೂಚನೆ

ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಪ್ರಕರಣ 94ಎ(1) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಈ ಕೆಳಕಂಡಂತೆ ರಚಿಸಿ ಆದೇಶಿಸಿದೆ.

ಕ್ರ. ಸಂ.	ಸದಸ್ಯರುಗಳ ಹೆಸರು ಮತ್ತು ವಿಳಾಸ	ಪದನಾಮ
1.	ಶ್ರೀ ಬಿ.ಎನ್ ರವಿಕುಮಾರ್ ಮಾನ್ಯ ಶಾಸಕರು, ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರ, ಚಿಕ್ಕಬಳ್ಳಾಪುರ ಜಿಲ್ಲೆ.	ಅಧ್ಯಕ್ಷರು
2.	ಶ್ರೀ ನಿರಂಜನ್ ಬಿನ್ ರಾಮಚಂದ್ರಚಾರಿ, ಸೊಣ್ಣೇನಹಳ್ಳಿ, ಶಿಡ್ಲಘಟ್ಟ ತಾಲ್ಲೂಕು	ಸದಸ್ಯರು (ಸಾಮಾನ್ಯ)
3.	ಶ್ರೀ ನಾರಾಯಣಪ್ಪ ಬಿನ್ ರಾಮಪ್ಪ, ಸಾದಲಿ, ಶಿಡ್ಲಘಟ್ಟ ತಾಲ್ಲೂಕು	ಸದಸ್ಯರು (ಪರಿಶಿಷ್ಟ ಜಾತಿ)
4.	ಶ್ರೀಮತಿ ಸರಸ್ವತಮ್ಮ ಕೋಂ ನರಸಿಂಹರೆಡ್ಡಿ, ಬೈಯಪ್ಪನಹಳ್ಳಿ, ಶಿಡ್ಲಘಟ್ಟ ತಾಲ್ಲೂಕು	ಸದಸ್ಯರು (ಮಹಿಳೆ)
5.	ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರ್.	ಸದಸ್ಯ ಕಾರ್ಯದರ್ಶಿ

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಹಾಂತಯ್ಯ ಎಸ್.ಹೊಸಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂ ಮಂಜೂರಾತಿ-1).

PR-1085

P S BASAVARAJU